Karnatak Law Society's
**Vishwanathrao Deshpande Institute of Technology**
**(Approved by AICTE, New Delhi. Affiliated to VTU, Belagavi)**
**(Recognised Under Section 2(f) by UGC, New Delhi)**
**Udyog Vidya Nagar, Haliyal – 581329, Dist: Uttar Kannada (Karnataka)**
**Phone: 08284-220861, 220334, 221409, Fax: 08284-220813**
**www.klsvdit.edu.in principal@klsvdit.edu.in**

Date: 30-06-2022

**ಪತ್ರಿಕಾ ಪ್ರಕಟಣೆ**

# ಪತ್ರಕರ್ತರ ಸಂಘದ ಪದಾಧಿಕಾರಿಗಳಿಗೆ ಸನ್ಮಾನ

ಕೆ.ಎಲ್.ಎಸ್ ವಿ.ಡಿ.ಐ.ಟಿ ಹಳಿಯಾಳದಲ್ಲಿ ಜೂನ್ 30 ರಂದು ಪತ್ರಿಕಾ ದಿನಾಚರಣೆಯ ಪ್ರಯುಕ್ತ ಕಾರ್ಯನಿರತ ಪತ್ರಕರ್ತರ ಸಂಘಕ್ಕೆ ನೂತನವಾಗಿ ಆಯ್ಕೆಗೊಂಡ ಪದಾಧಿಕಾರಿಗಳಿಗೆ ಸನ್ಮಾನ ಹಮ್ಮಿಕೊಳ್ಳಲಾಗಿತ್ತು.

ಹಳಿಯಾಳ ತಾಲೂಕಾ ಕಾರ್ಯನಿರತ ಪತ್ರಕರ್ತರ ಸಂಘಕ್ಕೆ ಅಧ್ಯಕ್ಷರಾಗಿ ಆಯ್ಕೆಯಾದ ಶ್ರೀ. ಸಂತೋಷ ಹಬ್ಬು ಅವರು ಸನ್ಮಾನ ಸ್ವೀಕರಿಸಿ ಮಾತನಾಡುತ್ತ 2004 ರಲ್ಲಿ ಸ್ಥಾಪನೆಯಾದ ಮಹಾವಿದ್ಯಾಲಯ ಅತಿ ಕಡಿಮೆ ಸಮಯದಲ್ಲಿ ಪಠ್ಯ ಮತ್ತು ಪಠ್ಯೇತರ ಚಟುವಟಿಕೆಗಳಲ್ಲಿ ಉತ್ತಮ ಸಾಧನೆ ತೋರುತ್ತಿದೆ ಎಂದು ನುಡಿದರು. ಕಾರ್ಯದರ್ಶಿಗಳಾಗಿ ಆಯ್ಕೆಯಾದ ಶ್ರೀ. ಮಂಜುನಾಥ ಶೇರಖಾನೆ, ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಕಾರ್ಯಕಾರಿ ಮಂಡಳಿ ಕಾರ್ಯದರ್ಶಿಗಳಾಗಿ ಆಯ್ಕೆಯಾದ ಶ್ರೀಮತಿ. ಸುಮಂಗಲಾ ಅಂಗಡಿ ಮತ್ತು ತಾಲೂಕಾ ಸಂಘದ ಸದಸ್ಯರಾದ ಶ್ರೀ. ವಿನಾಯಕ ಮೇಟಿ ಅವರನ್ನು ಈ ಸಂದರ್ಭದಲ್ಲಿ ಸನ್ಮಾನಿಸಲಾಯಿತು.

ಪ್ರಾಂಶುಪಾಲರಾದ ಡಾ. ವಿ ಎ ಕುಲಕರ್ಣಿ ಅವರು ಮಾತನಾಡುತ್ತ ಪತ್ರಕರ್ತರ ಸಂಘದ ಸದಸ್ಯರು ಮಹಾವಿದ್ಯಾಲಯದ ಜೊತೆ ಹೊಂದಿರುವ ಉತ್ತಮ ಬಾಂಧವ್ಯ ಹೀಗೆಯೆ ಮುಂದುವರಿಯಲಿ ಎಂದು ಹಾರೈಸಿದರು. ಮಹಾವಿದ್ಯಾಲಯದ ಆಡಳಿತ ವಿಭಾಗ ಮುಖ್ಯಸ್ಥರಾದ ಪ್ರೊ. ಮಂಜುನಾಥ ಡಿ, ಪ್ರೊ. ಎಸ್. ಡಿ. ಕುಲಕರ್ಣಿ ಉಪಸ್ಥಿತರಿದ್ದರು. ಪ್ರೊ. ವಿಜೇತ ಸ್ವಾದಿ ನಿರೂಪಿಸಿದರು. ಪ್ರೊ. ಸುಬ್ರಮಣ್ಯ ಹೆಗಡೆ ವಂದಿಸಿದರು.

ಪ್ರಾಂಶುಪಾಲರು

Principal
KLS Vishwanathrao Deshpande
Institute of Technology, Haliyal




अमृतं तु विद्या
OFFICE